ರಾಷ್ಟ್ರ ಜಾಗೃತಿಯ ದೈನಿಕ

# ಹೊಸ ದಿಗಂತ

**Thursday 02nd February 2023, Page No.12**

## RV College of Engineering and VTU Training and Placement Officer Conference at RVCE Campus

# ಅಗತ್ಯತೆಗೆ ತಕ್ಕಂತೆ ಪಠ್ಯಕ್ರಮ

**ಕೆಂಗೇರಿ:** ಮುಂದಿನ ದಿನಗಳಲ್ಲಿ ಉದ್ಯಮಗಳು ಮತ್ತು ವಿದ್ಯಾರ್ಥಿಗಳ ಅಗತ್ಯತೆಗೆ ತಕ್ಕಂತೆ ಪಠ್ಯಕ್ರಮದಲ್ಲಿ ಪೂರಕವಾದ ಬದಲಾವಣೆ ತರುವ ಉದ್ದೇಶ ಹೊಂದಲಾಗಿದೆ ಎಂದು ವಿಟಿಯು ಕುಲಪತಿ ಪ್ರೊ.ಎಸ್.ವಿದ್ಯಾಶಂಕರ್ ಹೇಳಿದರು. ಆರ್.ವಿ ಕಾಲೇಜ್ ಆಫ್ ಇಂಜಿನಿಯರಿಂಗ್ ಹಾಗೂ ವಿಟಿಯು ಸಹಯೋಗದಲ್ಲಿ ಆಯೋಜಿಸಲಾಗಿದ್ದ ವಿಟಿಯು -ಟ್ರೈನಿಂಗ್ ಆಂಡ್ ಪ್ಲೇಸ್ಮೆಂಟ್ ಆಫಿಸರ್ ಸಮಾವೇಶದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳ ಅಗತ್ಯತೆಗೆ ತಕ್ಕಂತೆ ಪಠ್ಯಕ್ರಮದಲ್ಲಿ ಪೂರಕವಾದ ಬದಲಾವಣೆ ತರುವ ಉದ್ದೇಶ ಹೊಂದಲಾಗಿದೆ. ಒಂದು ವಲಯದಲ್ಲಿ ವಿದ್ಯಾರ್ಥಿಗಳ ಕಡಿಮೆ ಸಂಖ್ಯೆ ದಾಖಲಾತಿಯಿದೆ ಎಂದು ಅದನ್ನು ಕೈಬಿಡಬಾರದು, ಪರಿಣತಿ ಹೊಂದಿರುವ ಪಠ್ಯಕ್ರಮದ ಜೊತೆಗೆ ಶಿಕ್ಷಕರು ಬೇರೆ ಯಾವುದಾದರೂ ಒಂದು ವಿಷಯದಲ್ಲಿ ತರಬೇತಿ ಪಡೆದರೆ ಕೌಶಲ್ಯ ವೃದ್ಧಿಯಾಗುತ್ತದೆ.ಇದರ ಜೊತೆಗೆ ವಿದ್ಯಾರ್ಥಿಗಳು ಬಯಸುವ ಐಚ್ಛಿಕ ವಿಷಯ ಬೋಧಿಸಲು ಸುಲಭವಾಗಲಿದೆ. ಈ ಮೂಲಕ ಶಿಕ್ಷಣ ಕ್ಷೇತ್ರದಲ್ಲಿ ಗಮನಾರ್ಹ ಬದಲಾವಣೆ ತರಲಿದೆ ಎಂದು ಹೇಳಿದರು.



ಟೊಯೋಟಾ ಇಂಡಸ್ಟ್ರೀಸಿನ ಟಿ.ಆರ್.ಪರಶುರಾಮನ್ ಮಾತನಾಡಿ, ಯುವ ಜನಸಂಖ್ಯೆ ಅತೀ ಹೆಚ್ಚು ಹೊಂದಿರುವ ರಾಷ್ಟ್ರ ನಮ್ಮದು, ಈ ಅವಕಾಶವನ್ನು ನಾವು ಶಕ್ತಿಯನ್ನಾಗಿ ಪರಿವರ್ತನೆ ಮಾಡಿಕೊಳ್ಳಬೇಕಿದೆ ಎಂದರು.

ಈ ಸಂದರ್ಭದಲ್ಲಿ ಆರ್.ವಿ.ಸಿ.ಇ ಪ್ರಾಂಶುಪಾಲ ಡಾ.ಕೆ.ಎನ್.ಸುಬ್ರಹ್ಮಣ್ಯ, ಜಂಟಿ ಕಾರ್ಯದರ್ಶಿ ಡಿ.ಪಿ.ನಾಗರಾಜ್, ಡಾ.ಕೆ.ಎಸ್.ಗೀತಾ ಉಪಸ್ಥಿತರಿದ್ದರು.